ಕರ್ನಾಟಕ ವಿಧಾನ ಪರಿಷತ್ತು

01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1155

02. ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಯು.ಬಿ. ವೆಂಕಟೇಶ್
(ನಾಮನಿರ್ದೇಶನ ಹೊಂದಿದವರು)

03. ಉತ್ತರಿಸುವ ದಿನಾಂಕ : 23/12/2021

04. ಉತ್ತರಿಸುವ ಸಚಿವರು. : ಮಾನ್ಯ ಗೃಹ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ	ರಾಜ್ಯಾದ್ಯಂತ ಮಕ್ಕಳ ಮೇಲೆ ನಡೆದ ಸೈಬರ್ ದೌರ್ಜನ್ಯ ಪ್ರಕರಣಗಳು 2019 ಕ್ಕೆ ಹೋಲಿಸಿದರೆ 2020 ರಲ್ಲಿ ಶೇ.40 ರಷ್ಟು ಹೆಚ್ಚಾಗಿದ್ದು ಈ ಪೈಕಿ ಕರ್ನಾಟಕವು 2ನೇ ಸ್ಥಾನದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಸರ್ಕಾರದ ಗಮನಕ್ಕೆ ಬಂದಿದೆ.
ಆ	ಕರ್ನಾಟಕದಲ್ಲಿ ಒಟ್ಟು ದಾಖಲಾಗಿರುವ ಸೈಬರ್ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಎಷ್ಟು; ಇಂತಹ ಪ್ರಕರಣಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ?	ರಾಜ್ಯದಲ್ಲಿ ಕಳೆದ 03 ವರ್ಷಗಳಲ್ಲಿ 2019, 2020, 2021 (ನವೆಂಬರ್ ಅಂತ್ಯದವರೆಗೆ ಸೈಬ್ಬರ್ ದೌರ್ಜನ್ಯಕ್ಕೆ ಸಂಬಂಧಿಸಿದಂತೆ ದಾಖಲಾದ ಪ್ರಕರಣಗಳು ಈ ಕೆಳಕಂಡಂತಿದೆ. ಕ್ರ.ಸಂ / ವರ್ಷ / ದಾಖಲಾದ ಪ್ರಕರಣ 01 / 2019 / 12043 02 / 2020 / 10757 03 / 2021 (ನವೆಂಬರ್–30 / 7133 ಸರ್ಕಾರವು ಇಂತಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿದ್ದು, ಇಂತಹ ಅಪರಾಧಗಳನ್ನು ತಡೆಗಟ್ಟಲು ಅನೇಕ ಕ್ರಮಗಳನ್ನು ಈ ಕೆಳಕಂಡಂತೆ ಕೈಗೊಳ್ಳಲಾಗಿದೆ. • ಸೈಬರ್ ಅಪರಾಧಗಳನ್ನು ಕಟ್ಟುನಿಟ್ಟಾಗಿ ನಿಯಂತ್ರಿಸಲು ಹಾಗೂ ಇಂತಹ ಪ್ರಕರಣಗಳನ್ನು ತಡೆಗಟ್ಟಲು ರಾಜ್ಯದ ಪ್ರತಿ ಜಿಲ್ಲೆ ಹಾಗೂ ನಗರಗಳಲ್ಲಿ ವಿಶೇಷ ಸೈಬರ್, ನಾರ್ಕೋಟಿಕ್ ಎಕನಾಮಿಕ್ ಪೊಲೀಸ್ ಠಾಣೆಗಳನ್ನು ಸ್ಥಾಪಿಸಲಾಗಿದೆ. ರಾಜ್ಯದಲ್ಲಿ ಒಟ್ಟು 46

		ಸಿ.ಇ.ಎನ್ ಪೊಲೀಸ್ ಠಾಣೆಗಳು ಹಾಗೂ ಇವುಗಳ ಪೈಕಿ ಬೆಂಗಳೂರು ನಗರದಲ್ಲಿ ಮಾತ್ರ 8 ವಿಶೇಷ ಸಿ.ಇ.ಎನ್ ಪೋಲೀಸ್ ಠಾಣೆಗಳು ಪ್ರತಿ ವಿಭಾಗಕ್ಕೆ ಒಂದರಂತೆ ಕಾರ್ಯ ನಿರ್ವಹಿಸುತ್ತಿದೆ. • ರಾಜ್ಯದ ನಗರ ಮತ್ತು ಮಹಾನಗರಗಳಲ್ಲಿ ಸೈಬರ್ ಮತ್ತು ಆರ್ಥಿಕ ಅಪರಾಧಗಳಲ್ಲಿ ತೊಡಗಿಸಿಕೊಂಡಿರುವವರ ವಿರುದ್ಧ ಐ.ಪಿ.ಸಿ, ಮತ್ತು ಐಟಿ ಕಾಯ್ದೆ, ಕೆ.ಪಿ.ಐ.ಡಿ ಕಾಯ್ದೆ, ಎಫ್.ಇ ಕಾಯ್ದೆ ಮತ್ತು Buds-2019 ಕಾಯ್ದೆಯ ವಿವಿಧ ಕಲಂಗಳಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಂಡು, ತನಿಖೆಯನ್ನು ನಿಯಮಾನುಸಾರ ಕೈಗೊಂಡು, ಆರೋಪಿತರ ವಿರುದ್ಧ ಘನ ನ್ಯಾಯಾಲಯಗಳಲ್ಲಿ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಲಾಗುತ್ತಿದೆ. • ಸೈಬರ್ ಕ್ರೈಂ ಪ್ರಕರಣಗಳನ್ನು ಪತ್ತೆ ಹಚ್ಚಲು ಬ್ಯಾಂಕಿನಿಂದ ಮಾಹಿತಿಯನ್ನು ಪಡೆಯಲಾಗುತ್ತದೆ. • ಆರೋಪಿಗಳನ್ನು ಪತ್ತೆ ಹಚ್ಚಲು ಅವರ ಮೊಬೈಲ್ ನಂಬರ್‌ಗಳ ಸಿ.ಡಿ.ಆರ್., ಎಸ್.ಡಿ.ಆರ್ ಮತ್ತು ಸಿ.ಎ.ಎಫ್ ಮಾಹಿತಿಗಳನ್ನು ಪಡೆಯಲಾಗುತ್ತದೆ. • ಸೈಬರ್ ಪೊಲೀಸ್ ಠಾಣೆಗಳನ್ನು ಉನ್ನತ ದರ್ಜೆಗೆ ಏರಿಸಿ, ಪೊಲೀಸ್ ಠಾಣೆಯ ಅಧಿಕಾರಿ ಮತ್ತು ಪೊಲೀಸ್ ಸಿಬ್ಬಂದಿಗಳಿಗೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಬಗ್ಗೆ ವಿಶೇಷ ತರಬೇತಿಯನ್ನು (ADVANCE TECHNOLOGY TRAINING) ನೀಡಲಾಗಿದೆ. • ರಾಜ್ಯದಲ್ಲಿ ಸೈಬರ್ ಕ್ರೈಂ ಅಪರಾಧ ಶೀರ್ಷಿಕೆ ಅಡಿಯಲ್ಲಿ ದಾಖಲಾದ ಪ್ರಕರಣಗಳಲ್ಲಿ ಮುಖ್ಯವಾಗಿ ಹಲವಾರು ಐ.ಪಿ ಗಳನ್ನು (Internet Protocol) ಸೈಬರ್ ಅಪರಾಧಕ್ಕೆ ದುರ್ಬಳಕೆ ಮಾಡುತ್ತಿರುವುದು ಹಾಗೂ ಬೇರೆ ಬೇರೆ ಸ್ಥಳಗಳಿಂದ ಅಕ್ರಮವಾಗಿ ಐ.ಪಿ ಗಳನ್ನು ಬಳಸಿಕೊಂಡು ವಂಚನೆ ಮಾಡುತ್ತಿರುವುದರಿಂದ ಪ್ರಕರಣಗಳ ಪತ್ತೆ/ತನಿಖೆಯನ್ನು ಕೈಗೊಳ್ಳಲಾಗಿರುತ್ತದೆ.

HD 45PCQ2021

(ಆರಗ ಜ್ಞಾನೇಂದ್ರ)
ಗೃಹ ಸಚಿವರು